# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್-145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರಾದ ಶ್ರೀ. ಮಹಾಂತೇಶ್ ಬುರನಾಮರ ಕಾರ್ಯಪಾಲಕ ಅಭಿಯಂತರರು (ಯೋಜನೆ-ದಕ್ಷಿಣ) ಮತ್ತು ನೋಡಲ್ ಅಧಿಕಾರಿ ಅಪ್ಪಣೆ ಮೇರೆಗೆ ದಿನಾಂಕ:03/09/2022ರ ಶನಿವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

ಹಾಜರಿದ್ದವರು:-

1. ಶ್ರೀ. ಮಹಾಂತೇಶ್ ಬುರನಾಮರ ಕಾರ್ಯಪಾಲಕ ಅಭಿಯಂತರರು (ಯೋಜನೆ-ದಕ್ಷಿಣ) ಮತ್ತು ನೋಡಲ್ ಅಧಿಕಾರಿ.
2. ಶ್ರೀಮತಿ. ಲಕ್ಷ್ಮೀದೇವಿ, ಉಪ ಆಯುಕ್ತರು ಕಂದಾಯ (ದಕ್ಷಿಣ).
3. ಶ್ರೀ. ವಿಜಯಕುಮಾರ್ ಕೆ.ಎಸ್. ಸಹಾಯಕ ಅಭಿಯಂತರರು ವಾರ್ಡ್-145.
4. ಶ್ರೀ. ದೇವವರ್ಮ, ಕೆಲಸ ಪರಿವೀಕ್ಷಕರು ವಾರ್ಡ್-145.
5. ಶ್ರೀ. ಆರ್. ಉಮಾಶಂಕರ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-145.
6. ಶ್ರೀಮತಿ. ದೀಪಿಕಾ, ಸಹಾಯಕ ಅಭಿಯಂತರರು, ಬೆಂ.ನೀ.ಸ ಮತ್ತು ಒ. ಮಂಡಳಿ.
7. ಹಾಗೂ ವಾರ್ಡಿನ ಸ್ಥಳೀಯರು.

ಸಭೆಗೆ ಗೈರು ಹಾಜರಾದ ಇಲಾಖೆಗಳು:-

1. ಪೊಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಸುವ್ಯವಸ್ಥೆ) ಆಡುಗೋಡಿ.
2. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ ವಾರ್ಡ್ 145.
3. ಸಹಾಯಕ ಇಂಜಿನಿಯರ್ (ಬೆಸ್ಕಾಂ).
4. ಅರಣ್ಯ ಇಲಾಖೆಯ ಅಧಿಕಾರಿಗಳು.
5. ವಿಲ್ಸನ್‌ಗಾರ್ಡನ್ ಸಂಚಾರ ಪೊಲೀಸ್ ಠಾಣೆ ವಾರ್ಡ್ 145.
6. ತೋಟಗಾರಿಕೆ ಇಲಾಖೆ, ಮೇಲ್ವಿಚಾರಕರು ವಾರ್ಡ್ 145.
7. ಸಹಾಯಕ ಇಂಜಿನಿಯರ್ (BWSSB).
8. ಸ.ಕಾ.ನಿ. ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ, ಬಿಬಿಎಂಪಿ ಕೇಂದ್ರ ಕಛೇರಿ.
9. ಸ.ಕಾ.ನಿ. ಅಭಿಯಂತರರು, ಯೋಜನೆ-ಕೇಂದ್ರ, ಬಿಬಿಎಂಪಿ ಕೇಂದ್ರ ಕಛೇರಿ.

*********



Scanned with CamScanner

1. ಸಭೆಯಲ್ಲಿ ನೋಡಲ್ ಅಧಿಕಾರಿ ರವರು ಮಾತನಾಡಿ ಮಾನ್ಯ ವಿಶೇಷ ಆಯುಕ್ತರು (ಆಡಳಿತ/ಚುನಾವಣೆ) ರವರ ಕಛೇರಿ ಪತ್ರ ಸಂಖ್ಯೆ:ಇಎಲ್‌ಎನ್/ಕೇಂದ್ರ/ಪಿಆರ್/227/22-23, ದಿನಾಂಕ:02-09-2022 ರಲ್ಲಿ ಮಾಹೆಯಾನ ನಡೆಯುವ ವಾರ್ಡ್ ಕಮಿಟಿ ಸಭೆಗಳಲ್ಲಿ ಚುನಾವಣೆ ಸಂಬಂಧಿತ ಅಂಶಗಳನ್ನು ಸಹ ತಪ್ಪದೇ ಕಾರ್ಯಸೂಚಿಗಳಲ್ಲಿ ಸೇರ್ಪಡಿಸಿಕೊಂಡು ಚರ್ಚಿಸಿ ಕ್ರಮ ವಹಿಸುವಂತೆ ನಿರ್ದೇಶನ ನೀಡಿರುವುದಾಗಿ ತಿಳಿಸಿ ಸದರಿ ಪತ್ರದಲ್ಲಿರುವ ಅಂಶಗಳನ್ನು ಸಭೆಗೆ ತಿಳಿಸಿದರು. ಅಂಶಗಳ ವಿವರ ಈ ಕೆಳಕಂಡಂತಿವೆ.

   1. ಮುಂಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆ ಸಂಬಂಧ ಪ್ರಕಟಿಸಲಾಗಿರುವ ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಅವಧಿಯನ್ನು ಇನ್ನು 7 ದಿನಗಳವರೆಗೆ ವಿಸ್ತರಿಸಲಾಗಿರುವ ಕುರಿತು.
   2. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಗುರುತಿನ ಚೀಟಿಗೆ ಆಧಾರ್ ಲಿಂಕ್ ಮಾಡುವ ಕುರಿತು (ನಮೂನೆ-6ಬಿ) ಮತ್ತು.
   3. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಪ್ರಸ್ತುತ ಚಾಲ್ತಿಯಲ್ಲಿರುವ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯ ಚಟುವಟಿಕೆಗಳ ಕುರಿತು, ಸಭೆಯಲ್ಲಿ ತಿಳಿಸಿದರು.

2. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ 2ನೇ ಮುಖ್ಯರಸ್ತೆ, 5ನೇ ಅಡ್ಡರಸ್ತೆಯಲ್ಲಿ ರಸ್ತೆ ಉಬ್ಬುಗಳನ್ನು ಅಳವಡಿಸಬೇಕೆಂದು ಕೋರಿರುತ್ತಾರೆ. ಈ ವಿಷಯವಾಗಿ ವಾರ್ಡ್ ಅಭಿಯಂತರರು ಮಾತನಾಡಿ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ರವರಿಗೆ ಬರುವುದರಿಂದ ಈ ವಿಷಯದ ಬಗ್ಗೆ ಕ್ರಮ ವಹಿಸಲು ಸದರಿ ವಿಭಾಗ ರವಗ ಗಮನಕ್ಕೆ ತರಲಾಗುವುದೆಂದು ಸಭೆಯಲ್ಲಿ ತಿಳಿಸಲಾಗಿರುತ್ತದೆ. ಹಾಗೂ ಸಭೆಯ ನಡವಳಿಗಳನ್ನು ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ವಿಭಾಗ ರವರಿಗೆ ಕಳುಹಿಸಿಕೊಡುವಂತೆ ನಿರ್ದೇಶನ ನೀಡಿದರು.

3. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ ವ್ಯಾಪ್ತಿಯಲ್ಲಿ ಸ್ವಚ್ಛತಾಕಾರ್ಯ ಸಮರ್ಪಕವಾಗಿ ನಡೆಯುತ್ತಿಲ್ಲವೆಂದು ತಿಳಿಸಿದರು. ಈ ವಿಷಯವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ವಿಭಾಗದ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಕ್ರಮ ವಹಿಸಲು ಸಭೆಯಲ್ಲಿ ತಿಳಿಸಲಾಯಿತು.



Scanned with CamScanner

4. ವಾರ್ಡಿನ ಸ್ಥಳೀಯರಾದ ಶ್ರೀ. ಸಂದೀಪ್ ರವರು ಮಾತನಾಡಿ ಸಾರ್ವಜನಿಕ ಆರೋಗ್ಯ ಕೇಂದ್ರದ ಮುಂಭಾಗದಲ್ಲಿ ದೊಡ್ಡ ಗುಂಡಿ ಉಂಟಾಗಿದ್ದು, ಇದನ್ನು ಕೂಡಲೇ ಮುಚ್ಚಲು ಸಭೆಯಲ್ಲಿ ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡಿನ ಅಭಿಯಂತರರಿಗೆ ಈ ಬಗ್ಗೆ ಕೂಡಲೇ ಕ್ರಮ ವಹಿಸುವಂತೆ ಸೂಚನೆ ನೀಡಿದರು.

5. ವಾರ್ಡಿನ ಸ್ಥಳೀಯರಾದ ಶ್ರೀ. ಸಂದೀಪ್ ರವರು ಮಾತನಾಡಿ ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆಯ ಮುಂಭಾಗದಲ್ಲಿ ಸರಿಯಾದ ಚರಂಡಿ ವ್ಯವಸ್ಥೆ ಇಲ್ಲವೆಂದು ಸಭೆಯಲ್ಲಿ ತಿಳಿಸಿರುತ್ತಾರೆ. ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡಿನ ಅಭಿಯಂತರರಿಗೆ ಈ ಬಗ್ಗೆ ಕೂಡಲೇ ಕ್ರಮ ವಹಿಸುವಂತೆ ಸೂಚನೆ ನೀಡಿದರು.

6. ವಾರ್ಡಿನ ಸ್ಥಳೀಯರು ಮಾತನಾಡಿ IIನೇ ಅಡ್ಡರಸ್ತೆ ವಿಲ್ಸನ್‌ಗಾರ್ಡನ್‌ನಲ್ಲಿ ಗಿಡಮರದ ಕೊಂಬೆಗಳು ಬಿದ್ದಿದ್ದು, ತೆರವುಗೊಳಿಸಬೇಕೆಂದು ಕೋರಿದರು. ಈ ವಿಷಯವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ವಿಭಾಗದ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಕ್ರಮ ವಹಿಸುವಂತೆ ಸಭೆಯಲ್ಲಿ ತಿಳಿಸಲಾಯಿತು.

7. ವಾರ್ಡಿನ ಸ್ಥಳೀಯರು ಮಾತನಾಡಿ ಹೆಚ್. ಸಿದ್ದಯ್ಯ ರಸ್ತೆಯ ಚರಂಡಿ ಹಾಗೂ ರಸ್ತೆ ಕಾಮಗಾರಿಯನ್ನು ಕೂಡಲೇ ನಿರ್ವಹಿಸಬೇಕೆಂದು ತಿಳಿಸಿ ಈ ರಸ್ತೆಯಲ್ಲಿರುವ ರಸ್ತೆ ಗುಂಡಿಗಳನ್ನು ಮುಚ್ಚಬೇಕೆಂದು ಸಬೆಯಲ್ಲಿ ತಿಳಿಸಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ, ವೈಟ್ ಟಾಪಿಂಗ್ ವಿಭಾಗ ರವರೊಂದಿಗೆ ದೂರವಾಣಿ ಮುಖಾಂತರ ಮಾತನಾಡಿ ಕೂಡಲೇ ಕ್ರಮ ವಹಿಸುವಂತೆ ತಿಳಿಸಿದರು.

8. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ 5ನೇ ಅಡ್ಡರಸ್ತೆಯ ತಿರುವಿನಲ್ಲಿರುವ ಬ್ಲ್ಯಾಕ್ ಸ್ಪಾಟ್ ಅನ್ನು ತೆರವುಗೊಳಿಸಬೇಕೆಂದು ಕೋರಿದರು. ಈ ವಿಷಯವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ವಿಭಾಗದ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಕ್ರಮ ವಹಿಸಲು ಸಭೆಯಲ್ಲಿ ತಿಳಿಸಲಾಯಿತು.



Scanned with CamScanner

9. ವಾರ್ಡಿನ ಸ್ಥಳೀಯರು ಮಾತನಾಡಿ ಮಳೆ ಹೆಚ್ಚಾದ ಸಮಯದಲ್ಲಿ ವಿಲ್ಸನ್‌ಗಾರ್ಡನ್ 6ನೇ ಅಡ್ಡರಸ್ತೆಯು ನೀರಿನಿಂದ ಮುಳುಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಸದರಿ ರಸ್ತೆಯ ಚರಂಡಿಗಳನ್ನು ದುರಸ್ಥಿಗೊಳಿಸಬೇಕೆಂದು ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡಿನ ಅಭಿಯಂತರರಿಗೆ ಈ ಬಗ್ಗೆ ಕೂಡಲೇ ಕ್ರಮ ವಹಿಸುವಂತೆ ಸೂಚನೆ ನೀಡಿದರು.

10. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ 6ನೇ ಅಡ್ಡರಸ್ತೆಯಲ್ಲಿ ಜಿಮ್‌ಗೆ ಬರುವವರೆಲ್ಲಾ ತಮ್ಮ ವಾಹನಗಳನ್ನು ರಸ್ತೆಯಲ್ಲಿ ನಿಲ್ಲಿಸುತ್ತಿರುವುದರಿಂದ ಸಾರ್ವಜನಿಕರ ಓಡಾಟಕ್ಕೆ ತುಂಬಾ ತೊಂದರೆಯಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು. ಈ ವಿಷಯವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಅಧಿಕಾರಿಯವರಿಗೆ ಈ ಬಗ್ಗೆ ಕ್ರಮ ವಹಿಸುವಂತೆ ತಿಳಿಸಿದರು.

11. ನೋಡಲ್ ಅಧಿಕಾರಿಯವರು ಮಾತನಾಡಿ ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಾಗುವಂತೆ ಪೊಲೀಸ್ ಇಲಾಖೆಯವರಿಗೆ ಪತ್ರ ಬರೆಯಲು ಸಭೆಯಲ್ಲಿ ತಿಳಿಸಿರುತ್ತಾರೆ.

12. ವಾರ್ಡಿನ ಸ್ಥಳೀಯರು ಮಾತನಾಡಿ ಕುಡಿಯು ನೀರು ಒಂದು ದಿನ ಬಿಟ್ಟು ಒಂದು ದಿನ ಬರುತ್ತಿದ್ದು, ನೀರಿನ ಒತ್ತಡ ಕಡಿಮೆ ಇರುವುದರಿಂದ ತೊಂದರೆಯಾಗುತ್ತಿದೆ ಎಂದು ತಿಳಿಸಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಇಲಾಖೆಯವರಿಗೆ ಈ ಬಗ್ಗೆ ಕೂಡಲೇ ಕ್ರಮ ವಹಿಸುವ ಸಂಬಂಧ ಸಭೆಯ ನಡವಳಿಗಳನ್ನು ಕಳುಹಿಸಿಕೊಡಲು ತಿಳಿಸಿದರು.

13. ವಾರ್ಡಿನ ಸ್ಥಳೀಯರು ಮಾತನಾಡಿ ಕಸ ವಿಂಗಡಣೆ ಮಾಡುವ ಸಲುವಾಗಿ ಹೊಸದಾಗಿ ಸ್ಥಳವನ್ನು ಗುರುತಿಸಲು ಕೋರಿರುತ್ತಾರೆ. ನೋಡಲ್ ಅಧಿಕಾರಿಯವರು ಮಾತನಾಡಿ ಘನತ್ಯಾಜ್ಯ ನಿರ್ವಹಣೆ ವಿಭಾಗ ರವರಿಗೆ ಈ ಬಗ್ಗೆ ಸ್ಥಳ ಲಭ್ಯತೆ ಇದ್ದಲ್ಲಿ ಗುರುತಿಸುಂತೆ ಸಭೆಯಲ್ಲಿ ತಿಳಿಸಿದರು.

14. ವಾರ್ಡಿನ ಸ್ಥಳೀಯರು ಮಾತನಾಡಿ ಹೆಚ್. ಸಿದ್ದಯ್ಯ ರಸ್ತೆಯಲ್ಲಿ ಬ್ರಿಡ್ಜ್ ಕಾಮಗಾರಿ ನಡೆಯುತ್ತಿದ್ದು, ಇದರಿಂದಾಗಿ ಸಾರ್ವಜನಿಕರಿಗೆ ತುಂಬಾ ತೊಂದರೆ ಉಂಟಾಗುತ್ತಿರುತ್ತದೆ ಎಂದು ತಿಳಿಸಿರುತ್ತಾರೆ. ಹಾಗೂ ಕಾಮಗಾರಿ ಯಾವಾಗ ಪೂರ್ಣಗೊಳ್ಳುವುದು ಎಂದು ಕೋರಿದರು. ಈ ವಿಷಯವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಈ ವಾರ್ಡ್ ವ್ಯಾಪ್ತಿಗೆ ಬರುವುದಿಲ್ಲವೆಂದು



Scanned with CamScanner

15. ನೋಡಲ್ ಅಧಿಕಾರಿಯವರು ಮಾತನಾಡಿ ರಾಣಿ ಪಾರ್ಕ್‌ನಲ್ಲಿ Shredding Machine ಅನ್ನು ಅಳವಡಿಸಲು ತಿಳಿಸಿರುತ್ತಾರೆ.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner